ಅಲ್ಲಾಹನ ಸಂದೇಶವಾಹಕರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹಾಸಿಗೆಯು ಹದಮಾಡಿದ ಚರ್ಮದ್ದಾಗಿತ್ತು ಮತ್ತು ಅದರ ಒಳಗಿನ ವಸ್ತು ಖರ್ಜೂರದ ನಾರಿನದಾಗಿತ್ತು

ಉಮ್ಮುಲ್ ಮೂಮಿನೀನ್ ಆಯಿಶಾ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ: ಅವರು ಹೇಳಿದರು: "ಅಲ್ಲಾಹನ ಸಂದೇಶವಾಹಕರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ)
ಹಾಸಿಗೆಯು ಹದಮಾಡಿದ ಚರ್ಮದ್ದಾಗಿತ್ತು ಮತ್ತು ಅದರ ಒಳಗಿನ ವಸ್ತು ಖರ್ಜೂರದ ನಾರಿನದಾಗಿತ್ತು." ಮುಸ್ಲಿಮ್ ಅವರ ವರದಿಯಲ್ಲಿ (ಹೀಗಿದೆ): "ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಒರಗಿಕೊಳ್ಳುತ್ತಿದ್ದ ದಿಂಬು ಹದಮಾಡಿದ ಚರ್ಮದ್ದಾಗಿತ್ತು ಮತ್ತು ಅದರ
ಒಳಗಿನ ವಸ್ತು ಖರ್ಜೂರದ ನಾರಿನದಾಗಿತ್ತು."
[صحيح] [متفق عليه]

ಉಮ್ಮುಲ್ ಮೂಮಿನೀನ್ ಆಯಿಶಾ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರವರು ತಿಳಿಸಿರುವುದೇನೆಂದರೆ: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮಲಗುತ್ತಿದ್ದ ಹಾಸಿಗೆಯು ಹದಮಾಡಿದ ಚರ್ಮದಿಂದ ತಯಾರಿಸಲ್ಪಟ್ಟಿತ್ತು ಮತ್ತು ಅದು ಖರ್ಜೂರದ ಮರದ ನಾರಿನಿಂದ ತುಂಬಲ್ಪಟ್ಟಿತ್ತು. ಅದೇ ರೀತಿ ಅವರು ಒರಗಿಕೊಳ್ಳುತ್ತಿದ್ದ ದಿಂಬು ಕೂಡ (ಹಾಗೆಯೇ ಇತ್ತು).

http://sunnah.global/hadeeth/kn/show/65820